

ಅರುಣ ಪಿ. ಭಟ್ಟ

## ವಾರಭವಿಷ್ಯ: 03.10.2024ರಿಂದ 09.10.2014ರವರೆಗೆ




ನಿಮ್ಮ ಬೌದ್ಧಿಕ ಶಕ್ತಿಯಿಂದ ವಿಶೇಷ ಗೌರವಕ್ಕೆ ಪಾತ್ರರಾಗುತ್ತೀರಿ. ಸ್ಪರ್ಧೆ, ಕ್ರೀಡಾ ಕ್ಷೇತ್ರಗಳಲ್ಲಿ ಉತ್ತಮ ಸ್ಥಾನ ಪಡೆಯಲಿದ್ದೀರಿ. ಮಕ್ಕಳು ಯಶಸ್ಸು ಪಡೆಯಲು ಪ್ರೋತ್ಸಾಹ ನೀಡಲಿದ್ದೀರಿ. ಹಣಕಾಸು ವಿಚಾರದಲ್ಲಿ ಪ್ರಗತಿ ಇದೆ. ಸಾಲ ಮರುಪಾವತಿಗೆ ಸಂಬಂಧಿಸಿದಂತೆ ಸಮಸ್ಯೆಗಳು ಎದುರಾಗಬಹುದು. ಪ್ರತಿಸ್ಪರ್ಧಿಗಳು ನಿಮ್ಮನ್ನು ಮಣಿಸಲು ಬಹಳ ಶ್ರಮಿಸುತ್ತಾರೆ. ಶುಭದಿನ 06. ಶ್ರೀರಾಮರಕ್ಷಾ ಸ್ತೋತ್ರ ಪಠಿಸಿರಿ.




ಜೀವನ ಮಟ್ಟ ಮೇಲಕ್ಕೆ ಏರಲಿದೆ. ಮನೆಗೆ ದುಬಾರಿ ವಿಲಾಸಿ ವಸ್ತುಗಳನ್ನು ಖರೀದಿಸುವ ಯೋಗ ಇದೆ. ಚೈತನ್ಯ, ದೈಹಿಕ ಕ್ಷಮತೆ ಹೆಚ್ಚಾಗಲಿದೆ. ದೈನಂದಿನ ಚಟುವಟಿಕೆಗಳನ್ನು ಇನ್ನಷ್ಟು ಉತ್ಸಾಹದಿಂದ ಮಾಡಲಿದ್ದೀರಿ. ವೈವಾಹಿಕ ಜೀವನದ ಕಡೆಗೆ ಹೆಚ್ಚು ಲಕ್ಷ್ಯ ನೀಡಿ. ಸಂಗಾತಿಯ ಅಗತ್ಯಗಳಿಗೆ ಸ್ಪಂದಿಸಿ. ಪ್ರೀತಿಪಾತ್ರರ ಜತೆಗಿನ ಬಾಂಧವ್ಯ ಗಟ್ಟಿಯಾಗಲಿದೆ. ಶುಭದಿನ 04. ಸೌಂದರ್ಯ ಲಹರಿ ಪಠಿಸಿರಿ.




ಉದ್ಯೋಗ, ವ್ಯಾಪಾರದಲ್ಲಿ ನಿಮ್ಮ ಹಿಡಿತ ಗಟ್ಟಿಯಾಗಲಿದೆ. ಸೋದರರ ಜೊತೆಗೆ ಬಾಂಧವ್ಯ ಗಟ್ಟಿಯಾಗಲಿದೆ. ಈ ಹಿಂದಿನ ಭಿನ್ನಾಭಿಪ್ರಾಯಗಳು ಬಗೆಹರಿಯಲಿವೆ. ಈ ವಾರ ನಿಮ್ಮ ಪಾಲಿಗೆ ಅದೃಷ್ಟ ಕೈ ಹಿಡಿಯಲಿದೆ. ಉದ್ಯೋಗ ವ್ಯಾಪಾರದಲ್ಲಿ ನಿಮ್ಮ ಸ್ಥಿತಿ ಉತ್ತಮವಾಗಿರುತ್ತದೆ. ಕುಟುಂಬಕ್ಕೆ ಅಗತ್ಯ ಇರುವ ವಸ್ತುಗಳನ್ನು ಖರೀದಿ ಮಾಡಲಿದ್ದೀರಿ. ಶುಭದಿನ 04. ಲಕ್ಷ್ಮೀನರಸಿಂಹ ಜಪ ಮಾಡಿರಿ.




ಆಸ್ತಿ ವ್ಯವಹಾರಗಳಲ್ಲಿ ಪ್ರಗತಿ ಕಾಣಿಸಿಕೊಳ್ಳಲಿದೆ. ಪ್ರವಾಸದ ಯೋಗ ಇದೆ. ವೃತ್ತಿ ಅಗತ್ಯಗಳಿಗೆ ಈ ಪ್ರಯಾಣ ಅನಿವಾರ್ಯ ಆಗಲಿದೆ. ನಿಮ್ಮ ಧೈರ್ಯ ಹೆಚ್ಚಾಗಲಿದೆ. ಧಾರ್ಮಿಕ ಹಾಗೂ ಸಾಮಾಜಿಕ ಕಾರ್ಯಕ್ರಮಗಳಲ್ಲಿ ಆಸಕ್ತಿ ಹೆಚ್ಚಾಗಲಿದೆ. ಕನಸಿನ ಗುರಿ ಮುಟ್ಟಲು ಸೂಕ್ತ ಅವಕಾಶ ದೊರೆಯಲಿದೆ. ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡಬಹುದು. ಒತ್ತಡ ಹೆಚ್ಚಾಗಬಹುದು. ಶುಭದಿನ 07. ವಿಷ್ಣು ಸಹಸ್ರನಾಮ ಪಠಿಸಿರಿ.




ಉದ್ಯೋಗ ಹಾಗೂ ವ್ಯಾಪಾರದಲ್ಲಿ ಯಶಸ್ಸು ಪಡೆಯಲಿದ್ದೀರಿ. ಕೌಟುಂಬಿಕ ವಿಷಯಗಳಲ್ಲಿ ಮುಖ್ಯ ತೀರ್ಮಾನ ಮಾಡಲಿದ್ದೀರಿ. ಇತ್ತೀಚೆಗೆ ನೀವು ಅನುಭವಿಸಿದ ನಷ್ಟವನ್ನು ಭರಿಸಲು ಪ್ರಯತ್ನವನ್ನು ಮಾಡಲಿದ್ದೀರಿ. ಸಮಾಜದಲ್ಲಿ ಉತ್ತಮ ಹೆಸರು ಪಡೆಯಲಿದ್ದೀರಿ. ವಾರಾಂತ್ಯಕ್ಕೆ ಸರಿಯುತ್ತಾ ಆಶಾದಾಯಕವಾದ ಫಲಿತಾಂಶಗಳು ದೊರೆಯಲಿವೆ. ಶುಭದಿನ 06. ಗಣಪತಿ ಸುಬ್ರಹ್ಮಣ್ಯ ಜಪ ಮಾಡಿರಿ.




ಪೋಷಕರ ಜೊತೆ ಬಾಂಧವ್ಯ ಗಟ್ಟಿಯಾಗಲಿದೆ. ಆಸ್ತಿ ವ್ಯವಹಾರದಲ್ಲಿ ಪ್ರಗತಿ ಕಾಣಲಿದೆ. ಸ್ಥಿರವಾದ ಆರೋಗ್ಯ ಕಾಪಾಡಿಕೊಳ್ಳಲು ಸವಾಲಾಗಿ ಪರಿಣಮಿಸಲಿದೆ. ಕಾನೂನು ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ನಿಮ್ಮ ಕೈ ಮೇಲಾಗಲಿದೆ. ಪ್ರೀತಿ ಪ್ರೇಮದಲ್ಲಿ ಇರುವವರು ಸಂಗಾತಿಯ ಸಿಟ್ಟನ್ನು ಸಹಿಸಬೇಕಾಗುತ್ತದೆ. ನಿಮ್ಮ ಖರ್ಚಿನ ಮೇಲೆ ಹಿಡಿತ ಇರಲಿ. ಆರೋಗ್ಯ ಉತ್ತಮವಾಗಿರುತ್ತದೆ. ಶುಭದಿನ 05. ವೆಂಕಟೇಶ್ವರ ಸ್ತೋತ್ರ ಪಠಿಸಿರಿ.




ಹಣಕಾಸು ಲಾಭ ಗಳಿಸುವ ಯೋಗ ಇದೆ. ಬೌದ್ಧಿಕ ಸಾಮರ್ಥ್ಯ ವೃದ್ಧಿ ಆಗಲಿದೆ. ಸಹೋದ್ಯೋಗಿಗಳ ಜೊತೆ ಉತ್ತಮ ಬಾಂಧವ್ಯ ಇರಲಿದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಪ್ರಗತಿ ಕಾಣಲಿದ್ದೀರಿ. ಆದರೆ ಅದಕ್ಕಾಗಿ ಪ್ರಾಮಾಣಿಕ ಪ್ರಯತ್ನವನ್ನು ಮಾಡಬೇಕು. ಖರ್ಚಿನ ಪ್ರಮಾಣ ಹೆಚ್ಚಾಗಲಿದೆ. ನಿಮ್ಮ ವರ್ಚಸ್ಸಿಗೆ ಧಕ್ಕೆ ತರುವುದಕ್ಕೆ ವಿರೋಧಿಗಳು ಪ್ರಯತ್ನ ಪಡಬಹುದು. ಶುಭದಿನ 04. ಚಂಡಿ ಪಾರಾಯಣ ಮಾಡಿರಿ.




ಉದ್ಯೋಗ ಸ್ಥಳದಲ್ಲಿ ನಿಮಗೆ ಅನುಕೂಲಕರವಾದ ಸನ್ನಿವೇಶ ಇರಲಿದೆ. ಸಹೋದ್ಯೋಗಿಗಳ ಬೆಂಬಲ ದೊರೆಯಲಿದೆ. ಆರೋಗ್ಯ ಸಮಸ್ಯೆಗಳು ಇದ್ದಲ್ಲಿ ನಿವಾರಣೆ ಆಗುತ್ತವೆ. ಸಮಾಜದಲ್ಲಿ ಪ್ರಭಾವಿಗಳಾಗಿ ಹೊರಹೊಮ್ಮಲಿದ್ದೀರಿ. ವ್ಯಾಪಾರಿಗಳಿಗೆ ಲಾಭದ ಪ್ರಮಾಣ ಹೆಚ್ಚಾಗಲಿದೆ. ಶೈಕ್ಷಣಿಕ ವಿಚಾರದಲ್ಲಿ ಪ್ರಗತಿ ಇದೆ. ವೃತ್ತಿ ಕಾರಣಕ್ಕಾಗಿ ಪ್ರಯಾಣ ಮಾಡಬೇಕಾಗುತ್ತದೆ. ಶುಭದಿನ 06. ದತ್ತಗುರು ಚರಿತ್ರೆ ಪಠಿಸಿರಿ.




ಈ ಅವಧಿಯಲ್ಲಿ ಅದೃಷ್ಟ ನಿಮ್ಮ ಪಾಲಿಗೆ ಇರಲಿದೆ. ಅನುಭವಿಗಳ ಮಾರ್ಗದರ್ಶನದಿಂದ ಹೊಸ ಕೌಶಲ್ಯ ಕಲಿಯಲು ಸಾಧ್ಯವಾಗುತ್ತದೆ. ಮಕ್ಕಳ ಪ್ರಗತಿಯಿಂದ ಮನಸಿಗೆ ಸಂತೋಷವಾಗುತ್ತದೆ. ಶೈಕ್ಷಣಿಕ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಸಮಗ್ರವಾದ ಯಶಸ್ಸು ಪಡೆಯುವ ಅವಕಾಶ ಇದೆ. ವಾರದ ಕೊನೆಗೆ ಸಣ್ಣ ಪುಟ್ಟ ಆರೋಗ್ಯ ಸಮಸ್ಯೆಗಳು ಕಾಡಬಹುದು. ಶುಭದಿನ 08. ಲಲಿತ ಸಹಸ್ರನಾಮ ಪಠಿಸಿರಿ.




ವಿದೇಶ ವ್ಯವಹಾರಗಳು ಲಾಭದಾಯಕವಾಗಿ ಇರಲಿವೆ. ದೊಡ್ಡ ಸಂಸ್ಥೆಗಳ ಜೊತೆಗೆ ವೃತ್ತಿಪರ ಒಪ್ಪಂದಕ್ಕೆ ಬರುವ ಅವಕಾಶಗಳು ಇವೆ. ಮಕ್ಕಳ ಜೊತೆಗೆ ಸಂತೋಷದ ಸಮಯ ಕಳೆಯಲಿದ್ದೀರಿ. ಈ ಹಿಂದೆ ನೀವು ಪಟ್ಟ ಶ್ರಮಕ್ಕೆ ಈಗ ಮಾನ್ಯತೆ ದೊರೆಯಲಿದ್ದು, ದೊಡ್ಡ ಮಟ್ಟದಲ್ಲಿ ಮನ್ನಣೆ ದೊರೆಯಲಿದೆ. ವೃತ್ತಿಜೀವನದಲ್ಲಿ ಸಕಾರಾತ್ಮಕವಾದ ಬೆಳವಣಿಗೆ ಕಾಣಲಿದ್ದೀರಿ. ಶುಭದಿನ 05. ಗಣಪತಿಗೆ ದೂರ್ವಾರ್ಚನೆ ಮಾಡಿರಿ.




ಸಂಗಾತಿಯ ಸಂಬಂಧ ಗಾಢವಾಗಲಿದೆ. ಕೌಟುಂಬಿಕ ಜೀವನದಲ್ಲಿ ಕೊಟ್ಟ ಮಾತಿನಂತೆ ನಡೆದುಕೊಳ್ಳಲಿದ್ದೀರಿ. ಸಮಾಜದ ಪ್ರಮುಖರು ನಿಮ್ಮ ಕಠಿಣ ಪರಿಶ್ರಮವನ್ನು ಗುರುತಿಸಲಿದ್ದಾರೆ. ಸಂಸ್ಥೆಗಳಲ್ಲಿ ಮುಖ್ಯ ಹುದ್ದೆಯಲ್ಲಿ ಇರುವವರಿಗೆ ಹಿಡಿತ ಗಟ್ಟಿ ಮಾಡಿಕೊಳ್ಳಲು ಅವಕಾಶ ದೊರೆಯಲಿದೆ. ಆರೋಗ್ಯದಲ್ಲಿ ಏರಿಳಿತ ಇರಲಿದೆ. ಸಕಾರಾತ್ಮಕ ಬೆಳವಣಿಗೆ ಕಾಣಲಿದ್ದೀರಿ. ಶುಭದಿನ 06. ಲಕ್ಷ್ಮಿ ಕನಕಧಾರಾ ಸ್ತೋತ್ರ ಪಠಿಸಿರಿ.




ಸೋದರರ ಜೊತೆ ಬಾಂಧವ್ಯ ಗಟ್ಟಿಯಾಗಲಿದೆ. ವೃತ್ತಿಪರ ಕಾರಣಗಳಿಗಾಗಿ ಪ್ರಯಾಣಗಳನ್ನು ಮಾಡಬೇಕಾಗುತ್ತದೆ. ವೈವಾಹಿಕ ಜೀವನ ಸಂತುಷ್ಟವಾಗಿರುತ್ತದೆ. ಕ್ರಿಯೇಟಿವ್ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಪ್ರಗತಿ ಇದೆ. ಕಾನೂನು ವ್ಯಾಜ್ಯಗಳು ನಡೆಯುತ್ತಿದ್ದಲ್ಲಿ ಅಗತ್ಯ ದಾಖಲೆ ಪತ್ರಗಳನ್ನು ಜೋಪಾನವಾಗಿ ಇಟ್ಟುಕೊಳ್ಳಿ. ವಾರಾಂತ್ಯಕ್ಕೆ ಶುಭ ಫಲಗಳು ಸಿಗಬಹುದು. ಶುಭದಿನ 04. ಶಿವಕವಚ ಪಠಿಸಿರಿ.